
# ಪಶ್ಚಿಮ ವಿಭಾಗದ ಎಸಿಪಿ ನೀಡಿದ್ದ ನೋಟಿಸ್ ರದ್ದು

**ವಿಕ ಸುದ್ದಿಲೋಕ** ಬೆಂಗಳೂರು

ಲೋಕಸಭೆ ಚುನಾವಣೆ ಸಮಯದಲ್ಲಿ ಯಾವುದೇ ಕಾನೂನುಬಾಹಿರ ಚಟುವಟಿಕೆ ಹಾಗೂ ಚುನಾವಣಾ ಅಕ್ರಮದಲ್ಲಿ ತೊಡಗುವುದಿಲ್ಲವೆಂದು ಮುಚ್ಚಳಿಕೆ ಬರೆದುಕೊಡುವಂತೆ ಸೂಚಿಸಿ ಮಲ್ಲೇಶ್ವರದ ಬಿಜೆಪಿ ಕಚೇರಿಯ ಕಾರ್ಯದರ್ಶಿ ಲೋಕೇಶ ಅಂಬೇಕಲ್ಲು ವಿರುದ್ಧ ನಗರ ಪಶ್ಚಿಮ ವಿಭಾಗದ ಉಪ ಪೊಲೀಸ್ ಆಯುಕ್ತ ಮತ್ತು ದಂಡಾಧಿಕಾರಿ ಜಾರಿ ಮಾಡಿದ್ದ ನೋಟಿಸ್ ಅನ್ನು ಹೈಕೋರ್ಟ್ ರದ್ದುಗೊಳಿಸಿದೆ.



ನೋಟಿಸ್ ಪ್ರಶ್ನಿಸಿ ಲೋಕೇಶ ಅಂಬೇಕಲ್ಲು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ.ಎಸ್.ಕಮಲ್ ಅವರಿದ್ದ ರಜಾಕಾಲದ ಪೀಠ ಈ ಆದೇಶ ಮಾಡಿದೆ.

ವಾದ-ಪ್ರತಿವಾದ ಆಲಿಸಿದ ನ್ಯಾಯಪೀಠ, ಅರ್ಜಿದಾರರ ವಿರುದ್ಧದ ನೋಟಿಸ್ ರದ್ದುಪಡಿಸಿ ಅರ್ಜಿ ಇತ್ಯರ್ಥಪಡಿಸಿದೆ.

''ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಅರ್ಜಿದಾರರಿಗೆ ನೋಟಿಸ್ ನೀಡಲಾಗಿದೆ. ಈಗಾಗಲೇ ರಾಜ್ಯದಲ್ಲಿ ಮತದಾನ ಪ್ರಕ್ರಿಯೆ ಪೂರ್ಣಗೊಂಡಿದೆ. ಹಾಗಾಗಿ, ಅರ್ಜಿದಾರರ ವಿರುದ್ಧದ ನೋಟಿಸ್ ಮಾನ್ಯತೆ ಕಳೆದುಕೊಂಡಿದೆ. ಆದ್ದರಿಂದ ಅದನ್ನು ರದ್ದುಪಡಿಸಲಾಗುತ್ತಿದೆ,'' ಎಂದು ನ್ಯಾಯಪೀಠ ತಿಳಿಸಿದೆ.

ಅರ್ಜಿದಾರರ ಪರ ವಾದಿಸಿದ ವಕೀಲ ಎಂ. ವಿನೋದ್ ಕುಮಾರ್, ''ನಗರದಲ್ಲಿ ಲೋಕಸಭೆ ಚುನಾವಣೆಯ ಮತದಾನ ಪ್ರಕ್ರಿಯೆ 2024ರ ಏ.26ರಂದು ಪೂರ್ಣಗೊಂಡಿದೆ. ಆನಂತರ ಮೇ 15ರಂದು ಅರ್ಜಿದಾರರಿಗೆ ನೋಟಿಸ್ ಜಾರಿಗೊಳಿಸಿ ಮುಚ್ಚಳಿಕೆಗೆ ಸಹಿ ಹಾಕಲು ನಗರದ ಪಶ್ಚಿಮ ವಿಭಾಗದ ಉಪ ಪೊಲೀಸ್ ಆಯುಕ್ತರು ಒತ್ತಾಯಿಸಿದ್ದಾರೆ. ವಾಟ್ಸಪ್ ಮೂಲಕ ನೋಟಿಸ್ ಜಾರಿಗೊಳಿಸಿದ್ದಾರೆ. ಕಳೆದ ವಿಧಾನಸಭೆ ಚುನಾವಣೆ ಸಂದರ್ಭದಲ್ಲಿನ ಘಟನೆ ಆಧರಿಸಿ ಅರ್ಜಿದಾರರ ವಿರುದ್ಧ ಆರೋಪ ಮಾಡಿದ್ದು, ಆ ಪ್ರಕರಣಕ್ಕೆ ಹೈಕೋರ್ಟ್ ತಡೆಯಾಜ್ಞೆ ಸಹ ನೀಡಿದೆ. ಹಾಗಾಗಿ, ಅರ್ಜಿದಾರರ ವಿರುದ್ಧ ನೋಟಿಸ್ ನೀಡಿರುವುದು ಕಾನೂನಿನ ಸ್ಪಷ್ಟ ದುರ್ಬಳಕೆ,'' ಎಂದು ಕೋರ್ಟ್ ಗಮನಸೆಳೆದಿದ್ದರು.

Scanned with CamScanner